**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯಮಂತ್ರಿಯವರು ಕಂಡಿಕೆ-185ರಲ್ಲಿ ಘೋಷಿಸಿರುವ ಕುರಿತು.

**ಓದಲಾಗಿದೆ:** 1.ಸರ್ಕಾರದ ಆದೇಶ ಸಂಖ್ಯೆ:ಕೌಉಜೀಇ 144 ಉಜೀಇ 2020, ದಿನಾಂಕ:15-06-2020
2. ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ ಇವರ ಅ.ಟಿ ಸಂಖ್ಯೆ:MWD 13 MDC 2022, ದಿನಾಂಕ:08-04-2022

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1) ರಲ್ಲಿ ಕೇಂದ್ರ ಸರ್ಕಾರದ 'ಪ್ರಧಾನ ಮಂತ್ರಿ ಬೀದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ'ಯ (PM SVANidhi) ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಮತಿ ನೀಡಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-185ರಲ್ಲಿ ಮಾನ್ಯ ಮುಖ್ಯಮಂತ್ರಿಯವರು "ಅಲ್ಪಸಂಖ್ಯಾತರ ಇಲಾಖೆಯಡಿಯಲ್ಲಿನ ಪರವಾನಗಿ ಪಡೆದಿರುವ ಬೀದಿ ಬದಿ ವ್ಯಾಪಾರಿಗಳು, ತಳ್ಳು ಗಾಡಿ ಮಾರಾಟಗಾರರು, ಸಣ್ಣ ಪುಟ್ಟ ತರಕಾರಿ ಮತ್ತು ಹಣ್ಣು ವ್ಯಾಪಾರಿಗಳಿಗೆ ಹಾಗೂ ಆಟೋ ಚಾಲಕರುಗಳಿಗೆ ಜೀವನೋಪಾಯ ಅಭಿಯಾನದ ಸಹಯೋಗದೊಂದಿಗೆ ಆರ್ಥಿಕ ಸಹಾಯವನ್ನು ಒದಗಿಸಲಾಗುವುದು' ಎಂದು ಘೋಷಿಸಿರುತ್ತಾರೆ.

ಸದರಿ ಕಂಡಿಕೆಯ ಕುರಿತು ಆರ್ಥಿಕ ಇಲಾಖೆಯು ರಾಷ್ಟ್ರೀಯ ಜೀವನೋಪಾಯ ಅಭಿಯಾನದ ಸಹಯೋಗದೊಂದಿಗೆ ಆರ್ಥಿಕ ಸಹಾಯವನ್ನು ಒದಗಿಸುವ ಉದ್ದೇಶದಿಂದ ಸದರಿ ಘೋಷಣೆಯನ್ನು ಮಾಡಲಾಗಿದ್ದು, ಕಾರ್ಯಕ್ರಮ ಈಗಾಗಲೇ ಚಾಲ್ತಿಯಲ್ಲಿರುವುದರಿಂದ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಮೂಲಕ ಈ ಯೋಜನೆಯನ್ನು ಸಮೃದ್ಧಿ ಯೋಜನೆಯ ಹೆಸರಿನಲ್ಲಿ ಅನುಷ್ಠಾನಗೊಳಿಸಲು ಅವಕಾಶವಿಲ್ಲವೆಂದು ತಿಳಿಸಿರುತ್ತದೆ.

ಮುಂದುವರೆದು, ಯೋಜನಾ ಇಲಾಖೆಯು PM Street Vendor ಯೋಜನೆಯ ಅಡಿಯಲ್ಲಿ ಮೊತ್ತವನ್ನು ಪಡೆಯಬೇಕೆಂದು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯು ಕೌಶಲ್ಯಾಭಿವೃದ್ಧಿ ಇಲಾಖೆಗೆ ಪಟ್ಟಿಯನ್ನು ನೀಡಬೇಕೆಂಬ ಷರತ್ತಿನೊಂದಿಗೆ ಮತ್ತು ಆರ್ಥಿಕ ಇಲಾಖೆಯ ಅನುಮೋದನೆ ಪಡೆಯುವ ಮಾರ್ಗಸೂಚಿಯನ್ವಯ ನಿಯಮಾನುಸಾರವಾಗಿ ಮತ್ತು ಪಾರದರ್ಶಕತೆಯನ್ವಯ ಅನುಷ್ಠಾನಗೊಳಿಸುವ ಷರತ್ತಿನೊಂದಿಗೆ ಸಹಮತಿ ನೀಡಿದೆ ಎಂದು ತಿಳಿಸಿರುತ್ತದೆ.

ಅದರಂತೆ, ಸದರಿ ಕಾರ್ಯಕ್ರಮ ಈಗಾಗಲೇ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಲ್ಲಿ ಚಾಲ್ತಿಯಲ್ಲಿರುವುದರಿಂದ ಸದರಿ ಆಯವ್ಯಯ ಭಾಷಣದ ಕಂಡಿಕೆ-185ನ್ನು ಅನುಷ್ಠಾನಗೊಳಿಸುವ ಕುರಿತು ಆರ್ಥಿಕ ಇಲಾಖೆ / ಯೋಜನಾ ಇಲಾಖೆ ನೀಡಿರುವ ನಿರ್ದೇಶನದಂತೆ ತಮ್ಮ ಇಲಾಖೆಯ ವತಿಯಿಂದ ಸರ್ಕಾರಿ ಆದೇಶ ಹೊರಡಿಸಲು ಕ್ರಮಕೈಗೊಂಡು ಈ ಇಲಾಖೆಗೆ ಮಾಹಿತಿ ನೀಡುವಂತೆ ಸದರಿ ಕಂಡಿಕೆಯನ್ನು ಕೌಶಲ್ಯಾಭಿವೃದ್ಧಿ ಇಲಾಖೆಗೆ ವರ್ಗಾಯಿಸಿರುವುದಾಗಿ ತಿಳಿಸಿರುತ್ತಾರೆ.

..2/-

ಪ್ರಸ್ತಾವನೆಯನ್ನು ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ ಕೌಉಜೀಇ 63 ಉಜೀಇ 2022 ಬೆಂಗಳೂರು, ದಿನಾಂಕ: 20.04.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-185ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿದಂತೆ "ಅಲ್ಪಸಂಖ್ಯಾತರ ಇಲಾಖೆಯಡಿಯಲ್ಲಿನ ಪರವಾನಗಿ ಪಡೆದಿರುವ ಬೀದಿ ಬದಿ ವ್ಯಾಪಾರಿಗಳು, ತಳ್ಳು ಗಾಡಿ ಮಾರಾಟಗಾರರು, ಸಣ್ಣ ಪುಟ್ಟ ತರಕಾರಿ ಮತ್ತು ಹಣ್ಣು ವ್ಯಾಪಾರಿಗಳಿಗೆ ಹಾಗೂ ಆಟೋ ಚಾಲಕರುಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಕೌಉಜೀಇ 144 ಉಜೀಇ 2020 ದಿನಾಂಕ:15-06-2020ರಲ್ಲಿ ಕೇಂದ್ರ ಸರ್ಕಾರದ 'ಪ್ರಧಾನ ಮಂತ್ರಿ ಬೀದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ'ಯ (PM SVANidhi) ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿರುವಂತೆ ರಾಷ್ಟ್ರೀಯ ಜೀವನೋಪಾಯ ಅಭಿಯಾನದ ಸಹಯೋಗದೊಂದಿಗೆ ಆರ್ಥಿಕ ಸಹಾಯವನ್ನು ಒದಗಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 211 ವೆಚ್ಚ-3/2022 ದಿನಾಂಕ:04.04.2022 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿಎಸ್ 12 ಐಎಂಎಂ 2022 ದಿನಾಂಕ:04.04.2022ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

20/04/2022

(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ

ಇವರಿಗೆ:

1. ಮಹಾಲೇಖಪಾಲರು ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ.
5. ಎಲ್ಲಾ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು / ಅಪರ ಮುಖ್ಯ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ಆಯುಕ್ತರು, ಬಿ.ಬಿ.ಎಂ.ಪಿ., ಬೆಂಗಳೂರು.
7. ಜಂಟಿ ಕಾರ್ಯದರ್ಶಿಗಳು, ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ, ಭಾರತ ಸರ್ಕಾರ, ನವದೆಹಲಿ.
8. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ, ಬೆಂಗಳೂರು.
9. ಅಭಿಯಾನ ನಿರ್ದೇಶಕರು, ಡೇ-ನಲ್ಮ್, ಬೆಂಗಳೂರು.
10. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ.ಟವರ್, ಬೆಂಗಳೂರು.
11. ಖಜಾನಾಧಿಕಾರಿ, ರಾಜ್ಯಹುಜೂರ್ ಖಜಾನೆ, ಬೆಂಗಳೂರು.

...3/-

12. ಎಲ್ಲಾ ಜಿಲ್ಲಾಧಿಕಾರಿಗಳು,
13. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
14. ಆಯುಕ್ತರು/ಪೌರಾಯುಕ್ತರು/ಮುಖ್ಯಾಧಿಕಾರಿಗಳು
15. ಆರ್.ಬಿ.ಐ.ನ ರಾಜ್ಯ ಪ್ರತಿನಿಧಿ.
16. ರಾಜ್ಯ ಸಂಚಾಲಯಕರು, ಎಸ್.ಎಲ್.ಬಿ.ಸಿ.
17. ಜಿಲ್ಲಾ ಲೀಡ್ ಬ್ಯಾಂಕ್ ಮುಖ್ಯಸ್ಥರು
18. ಸಿಡ್‌ಬಿ ಯ ರಾಜ್ಯ ಪ್ರತಿನಿಧಿ
19. ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿಯ ಸಂಚಾಲಕರು
20. ಪೌರಾಯುಕ್ತರು (ಇ.ಓ.)
21. ಎನ್.ಬಿ.ಎಫ್.ಸಿ/ಎಂ.ಎಫ್.ಐ.
22. ಪ್ರದೇಶ ಮತ್ತು ನಗರ ಮಟ್ಟದ ಒಕ್ಕೂಟದ ಪ್ರತಿನಿಧಿಗಳು
23. ಸಮುದಾಯ ಸಂಘಟನಾಧಿಕಾರಿ/ ಸಮುದಾಯ ಸಂಘಟಕರು.
24. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
25. ಮಾನ್ಯ ಉಪ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
26. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೌಉಜೀ ಇಲಾಖೆ
27. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಉಜೀ ಇಲಾಖೆ
28. ಸರ್ಕಾರದ ಅಧೀನ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ. ವಿಕಾಸಸೌಧ,ಬೆಂಗಳೂರು.
29. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಉಜೀ ಇಲಾಖೆ
30. ಶಾಖಾ ರಕ್ಷ ಕಡತ /ಹೆಚ್ಚುವರಿ ಪ್ರತಿ.